ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಸುದ್ದಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 22/01/2020

# ಶಾಸಕರ ಹಾಜರಿಗೆ ಹೈಕೋರ್ಟ್ ಸೂಚನೆ

**ಬೆಂಗಳೂರು:** ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ನಡೆದ ಹಲ್ಲೆ ಪ್ರಕರಣವನ್ನು ಪರಸ್ಪರ ರಾಜೀಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ನಿರ್ಧರಿಸಿರುವ ಆನಂದ್ ಸಿಂಗ್ ಹಾಗೂ ಗಣೇಶ್ ಪೀಠದ ಮುಂದೆ ಹಾಜರಾಗಬೇಕು ಎಂದು ಹೈಕೋರ್ಟ್ ನಿರ್ದೇಶಿಸಿದೆ.

**ಶಾಸಕ ಆನಂದ್ ಸಿಂಗ್ ಮೇಲೆ ಗಣೇಶ್ ಹಲ್ಲೆ ನಡೆಸಿದ ಪ್ರಕರಣ**

ಆನಂದ್ ಸಿಂಗ್ ಮೇಲೆ ಹಲ್ಲೆ ನಡೆಸಿದ ಪ್ರಕರಣ ರದ್ದು ಕೋರಿ ಗಣೇಶ್ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಬಿ.ಎ. ಪಾಟೀಲ್ ಅವರಿದ್ದ ಪೀಠ ಮಂಗಳವಾರ ವಿಚಾರಣೆ ನಡೆಸಿತು.ಆನಂದ್ ಸಿಂಗ್ ಪರ ವಕೀಲರು ಪ್ರಮಾಣಪತ್ರ ಸಲ್ಲಿಸಿ, ಮಾತುಕತೆ ಮೂಲಕ ಜಗಳ ಪರಿಹರಿಸಿಕೊಳ್ಳಲಾಗುವುದು ಎಂದು ದೂರುದಾರರು ಅಫಿಡವಿಟ್‌ನಲ್ಲಿ ಹೇಳಿದ್ದಾರೆ ಎಂದರು. ಅದಕ್ಕೆ ನ್ಯಾಯಪೀಠ, ರಾಜೀ ಮಾಡಿಕೊಳ್ಳಲು ಬಯಸಿರುವ ಶಾಸಕರಿಬ್ಬರೂ ಹಾಜರಿದ್ದಾರೆಯೇ ಎಂದು ಪ್ರಶ್ನಿಸಿತು.

ಗಣೇಶ್ ಪರ ವಕೀಲರು ಉತ್ತರಿಸಿ, ಇಬ್ಬರೂ ನ್ಯಾಯಾಲಯದ ಮುಂದೆ ಹಾಜರಿಲ್ಲ. ಆದರೆ, ದೂರುದಾರ ಆನಂದ್ ಸಿಂಗ್ ಅವರೇ ಅಫಿಡವಿಟ್ ಸಲ್ಲಿಸಿದ್ದಾರೆ ಎಂದರು. ಅದನ್ನೊಪ್ಪದ ಪೀಠ, ಇಬ್ಬರೂ ಖುದ್ದು ಹಾಜರಾಗಲೇಬೇಕು. ಅಫಿಡವಿಟ್‌ಗೆ ಅವರೇ ಸಹಿ ಮಾಡಿದ್ದಾರೆ ಎನ್ನುವುದಕ್ಕೆ ಖಾತ್ರಿ ಏನು ಎಂದು ಪ್ರಶ್ನಿಸಿತು.